ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 19 ಹೈಕೋರ್ಟ್ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ

ದಿನಾಂಕ : DATE : 13/4/21

# ಕೇಂದ್ರ ಸರ್ಕಾರಕ್ಕೆ ನೋಟಿಸ್

» ಸುದ್ದಿವಾಹಿನಿಗಳಲ್ಲಿ ಅಶ್ಲೀಲ ದೃಶ್ಯ ಪ್ರಸಾರ ಆರೋಪ

**ಬೆಂಗಳೂರು:** ಸುದ್ದಿಗಳ ಹೆಸರಿನಲ್ಲಿ ಅಶ್ಲೀಲ, ಅಸಭ್ಯ ಹಾಗೂ ಹಿಂಸಾತ್ಮಕ ವಿಡಿಯೋಗಳನ್ನು ಪ್ರಸಾರ ಮಾಡುವುದರಿಂದ ಸುದ್ದಿವಾಹಿನಿಗಳನ್ನು ನಿಯಂತ್ರಿಸಲು ಶಾಸನಾತ್ಮಕ ನಿಯಮ ರೂಪಿಸಲು ಕೋರಿದ ಪಿಐಎಲ್ ಸಂಬಂಧ ಕೇಂದ್ರ ಸರ್ಕಾರಕ್ಕೆ ಹೈಕೋರ್ಟ್ ನೋಟಿಸ್ ಜಾರಿಗೊಳಿಸಿದೆ.

ನಾಗಭೂಷಣ್ ರಾವ್ ಸಲ್ಲಿಸಿರುವ ಅರ್ಜಿಯನ್ನು ಸೋಮವಾರ ವಿಚಾರಣೆ ನಡೆಸಿದ ಸಿಜೆ ನೇತೃತ್ವದ ವಿಭಾಗೀಯ ಪೀಠ, ಪ್ರತಿವಾದಿಗಳಾದ ಮಾಹಿತಿ ಮತ್ತು ಪ್ರಸಾರ ಸಚಿವಾಲಯ, ಬೆಂಗಳೂರು ನಗರ ಪೊಲೀಸ್ ಆಯುಕ್ತರು ಮತ್ತು ರಾಜ್ಯದ 9 ಖಾಸಗಿ ಸುದ್ದಿವಾಹಿನಿಗಳಿಗೆ ನೋಟಿಸ್ ಜಾರಿಗೊಳಿಸಿ ವಿಚಾರಣೆ ಮುಂದೂಡಿತು.

**ಅರ್ಜಿಯಲ್ಲೇನಿದೆ?:** ವಿದ್ಯುನ್ಮಾನ ಮಾಧ್ಯಮಗಳಲ್ಲಿ ಸುದ್ದಿಯ ಹೆಸರಿನಲ್ಲಿ ರಾಜಕೀಯ ಹಾಗೂ ಧಾರ್ಮಿಕ ಮುಖಂಡರು, ಸೆಲೆಬ್ರಿಟಿಗಳಿಗೆ ಸಂಬಂಧಿಸಿದ ಅಶ್ಲೀಲ ಮತ್ತು ಅಸಭ್ಯ ದೃಶ್ಯಗಳನ್ನು ಪ್ರಸಾರ ಮಾಡಲಾಗುತ್ತಿದೆ. ಇದರಿಂದ, ಮನೆ ಮಂದಿ ಎಲ್ಲ ಒಟ್ಟಿಗೆ ಕುಳಿತು ಸುದ್ದಿವಾಹಿನಿಗಳನ್ನು ವೀಕ್ಷಿಸಲು ಆಗುತ್ತಿಲ್ಲ. ಇಂಥ ದೃಶ್ಯಗಳಿಂದ ಮಕ್ಕಳ ಮನಸ್ಸಿನ ಮೇಲೆ ದುಷ್ಪರಿಣಾಮ ಉಂಟಾಗುತ್ತದೆ. ಇಂಥ ವಿಡಿಯೋ, ಆಡಿಯೋ ಹಾಗೂ ಫೋಟೋಗಳ ಪ್ರಸಾರ ನಿಯಂತ್ರಿಸಲು ನಿರ್ದಿಷ್ಟ ನಿಯಮಗಳೂ ಇಲ್ಲ ಎಂದು ಅರ್ಜಿಯಲ್ಲಿ ಹೇಳಲಾಗಿದೆ. ಇಂಥ ಸುದ್ದಿಗಳನ್ನು ವೈಭವೀಕರಿಸಿ ಪ್ರಸಾರ ಮಾಡದಂತೆ ಎಲ್ಲ ಸುದ್ದಿವಾಹಿನಿಗಳಿಗೆ ನಿರ್ದೇಶಿಸಬೇಕು ಎಂದು ಅರ್ಜಿಯಲ್ಲಿ ಕೋರಲಾಗಿದೆ.